## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 477 |
| ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 19.07.2024 |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ತುಮಕೂರು, ಚಿತ್ರದುರ್ಗ, ದಾವಣಗೆರೆ, ಹಾಸನ ಮುಂತಾದ ಜಿಲ್ಲೆಗಳಲ್ಲಿ ಈಗಲೂ ಸಹ ಕಾಡುಗೊಲ್ಲ ಸಮುದಾಯಕ್ಕೆ ಸೇರಿದ ಗೊಲ್ಲರಹಟ್ಟಿಗಳಲ್ಲಿ ಋತುಮತಿಯಾದಾಗ ಮಹಿಳೆಯರು ನಾನಾ ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ. | ಗೊಲ್ಲರಹಟ್ಟಿಗಳಲ್ಲಿ ಇಂದಿಗೂ ಮೂಢನಂಬಿಕೆ ಆಚರಣೆಯಲ್ಲಿದ್ದು, ಇಂತಹ ಅವೈಜ್ಞಾನಿಕ ಮತ್ತು ಅನಿಷ್ಟ ಪದ್ಧತಿ ಆಚರಣೆಯಿಂದ ಮಹಿಳೆಯರು ತೀವ್ರವಾದಂತಹ ಸಂಕಷ್ಟಕ್ಕೆ ಒಳಗಾಗುತ್ತಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ಇಂತಹ ಮೂಢನಂಬಿಕೆ ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಹಾಗಿದ್ದಲ್ಲಿ, ಈ ಸಮುದಾಯದವರು ವೈಜ್ಞಾನಿಕ ಮತ್ತು ವೈಚಾರಿಕ ಜೀವನ ನಡೆಸಲು ಸರ್ಕಾರ ಯಾವ ಜಾಗೃತಿ ಕ್ರಮಗಳನ್ನು ಜರುಗಿಸಿದೆ ಮತ್ತು ಆ ಜಾಗೃತಿ ಕಾರ್ಯಕ್ರಮಗಳು ಯಾವುವು? | ಕಾಡುಗೊಲ್ಲ ಸಮುದಾಯಕ್ಕೆ ಸಂಬಂಧಿಸಿದಂತೆ, "ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ", "ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ", "ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ", "ಗ್ರಾಮಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ" ಹಾಗೂ ಜಿಲ್ಲಾಧಿಕಾರಿಗಳಿಂದ ಜಾಗೃತಿ/ಅರಿವು ಮೂಡಿಸುವ ಕ್ರಮ ವಹಿಸಲಾಗುತ್ತಿದೆ.<br>ಇಂತಹ ಮೂಢನಂಬಿಕೆ ನಿವಾರಿಸಲು ಜಿಲ್ಲಾ/ತಾಲ್ಲೂಕು/ಗ್ರಾಮಮಟ್ಟದಲ್ಲಿ ಇಲಾಖೆಯು ಕೈಗೊಂಡಿರುವ ಕ್ರಮಗಳು:<br><br>• ಗ್ರಾಮ ಪಂಚಾಯತ್ ಮಟ್ಟದಲ್ಲಿ ಮೂಡನಂಬಿಕೆ ನಿವಾರಿಸಲು ಅರಿವು ಕಾರ್ಯಕ್ರಮಗಳನ್ನು ಹಾಗೂ ಜಾಗೃತಿ ಜಾಥಾಗಳನ್ನು ಹಮ್ಮಿ ಕೊಳ್ಳಲಾಗಿರುತ್ತದೆ.<br>• ಗ್ರಾಮಗಳಲ್ಲಿ ಗ್ರಾಮ ಸಭೆ ಮಾಡಿ ಗ್ರಾಮದ ಮುಖಂಡರು, ಪೂಜಾರಿಗಳು, ಗೊಲ್ಲ ಸಮುದಾಯದ ಜನರನ್ನು ಕರೆಸಿ ಹೆಣ್ಣು ಮಕ್ಕಳು ಋತಿಮತಿಯಾದಾಗ ಮನೆಯಿಂದ ಹೊರಗಡೆ ಇಡಬಾರದು ಎಂಬ ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.<br>• ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಗ್ರಾಮ ಪಂಚಾಯತ್‌ಗಳಲ್ಲಿ ಗೊಲ್ಲರಹಟ್ಟಿಗೆ ಸಂಬಂಧಿಸಿದ ಮೂಢನಂಬಿಕೆಯ ಬಗ್ಗೆ ಗೊಲ್ಲರಹಟ್ಟಿಗಳಿಗೆ ಭೇಟಿ ನೀಡಿ ಗ್ರಾಮದ ಮುಖಂಡರುಗಳಿಗೆ ಹಾಗೂ ಗ್ರಾಮಸ್ಥರಿಗೆ ಅರಿವು ಮೂಡಿಸುವ / ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. |

| | | |
|---|---|---|
| | | • ಈ ಮೂಢನಂಬಿಕೆ ನಿವಾರಿಸಲು ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಮತ್ತು ಮೇಲ್ವಿಚಾರಕಿಯರ ಮೂಲಕ ಇಂತಹ ಆಚರಣೆಗಳಿಂದ ಮಹಿಳೆಯರ ದೈಹಿಕ ಮತ್ತು ಮಾನಸಿಕ ಆರೋಗ್ಯದ ಮೇಲೆ ಆಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಲಾಗಿದೆ. |

**ಸಂಖ್ಯೆ: ಮಮಇ 149 ಮಮಅ 2024**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು